ದಿನಾಂಕ 02.12.2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.

**ಪಾಟೀ ಸವಾಲುಃ- ಪ್ರತಿವಾದಿ ಪರ ವಕೀಲರಿಂದಃ-**

ನಾನು ಮತ್ತು ಪ್ರತಿವಾದಿಗಳು ಅಕ್ಕಸಾಲಿಗ ವೃತ್ತಿಯವರು ಎಂದರೆ ಸರಿ. ದಾವಾ ಎ ಅನುಸೂಚಿ ಸ್ವತ್ತುಗಳು ನನ್ನ ತಂದೆಯ ಸ್ವಯಾರ್ಜಿತ ಸ್ವತ್ತುಗಳು ಎಂದರೆ ಸರಿ. ದಾವಾ ಬಿ ಅನುಸೂಚಿಯ 1 ಮತ್ತು 2ನೇ ಸ್ವತ್ತುಗಳು ನನ್ನ ತಂದೆಯ ಸ್ವಯಾರ್ಜಿತ ಸ್ವತ್ತುಗಳು ಎಂದರೆ ಸರಿ. ಸದರಿ ಸ್ವತ್ತುಗಳಲ್ಲಿ ಕಾಫಿ ಗಿಡ, ಮೆಣಸು ಮತ್ತು ಬೆಲೆ ಬಾಳುವ ಮರಗಳು ಇವೆ ಎಂದೆರ ಸರಿ. ದಾವಾ ಎ ಅನುಸೂಚಿ ಮತ್ತು ಬಿ ಅನುಸೂಚಿಯ 1 ನೇ ಸ್ವತ್ತಿನ ಪಹಣಿ ಪತ್ರಿಕೆಗಳು ನನ್ನ ತಂದೆಯ ಹೆಸರಿನಲ್ಲಿ ಇವೆ ಎಂದರೆ ಸರಿ. ಬಿ ಅನುಸೂಚಿಯ 2ನೇ ಸ್ವತ್ತಿನ ಪಹಣಿಯು ನನ್ನ ತಂದೆಯ ಒಪ್ಪಿಗೆಯ ಮೇರೆಗೆ ನನ್ನ ತಾಯಿಯ ಹೆಸರಿಗೆ ಬದಲಾವಣೆಯಾಗಿರುತ್ತದೆ ಎಂದರೆ ಸರಿ. ನನ್ನ ತಂದೆಯು ಮೃತರಾದ ಬಳಿಕ ದಾವಾ ಎ ಅನುಸೂಚಿ ಮತ್ತು ಬಿ ಅನುಸೂಚಿಯ 1ನೇ ಸ್ವತ್ತಿನ ಪಹಣಿ ಪತ್ರಿಕೆಗಳು ನನ್ನ ತಾಯಿ ಹಾಗೂ ನನ್ನ ಮತ್ತು ಸಹೋದರರ ಹೆಸರಿನಲ್ಲಿ ಜಂಟಿಯಾಗಿ ಇವೆ ಎಂದರೆ ಸರಿಯಲ್ಲ. ಸದರಿ ವಿಚಾರ ನನಗೆ ಗೊತ್ತಿದ್ದರೂ ಸಹ ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ನನ್ನ ತಂದೆಯು ಮೃತರಾದ ಬಳಿಕ ನಾನು ಸೃಷ್ಟಿತ ದಾಖಲೆಗಳ ಆಧಾರದ ಮೇಲೆ ದಾವಾ ಎ ಅನುಸೂಚಿ ಮತ್ತು ಬಿ ಅನುಸೂಚಿಯ 1ನೇ ಸ್ವತ್ತಿನ ಪಹಣಿ ಪತ್ರಿಕೆಗಳನ್ನು ನನ್ನ ಹೆಸರಿಗೆ ದಾಖಲು ಮಾಡಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಪ್ರತಿವಾದಿಗಳು ನನ್ನ ಹೆಸರಿಗೆ ಆಗಿದ್ದಂತಹ ಕಂದಾಯ ದಾಖಲೆಗಳನ್ನು ಉಪ ವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿ ಪ್ರಶ್ನಿಸಿ

ರದ್ದುಪಡಿಸಿರುತ್ತಾರೆ ಎಂದರೆ ಸರಿ. ಪ್ರಸ್ತುತ ಪಹಣಿ ಪತ್ರಿಕೆಗಳು ನನ್ನ ಮತ್ತು ಪ್ರತಿವಾದಿಗಳ ಜಂಟಿ ಹೆಸರಿನಲ್ಲಿ ಇವೆ ಎಂದರೆ ಸರಿ. ನಾನು ಉಪವಿಭಾಗಾಧಿಕಾರಿಗಳ ನ್ಯಾಯಾಲಯದ ಆದೇಶವನ್ನು ಜಿಲ್ಲಾಧಿಕಾರಿಗಳ ನ್ಯಾಯಾಲಯದಲ್ಲಿ ಪ್ರಶ್ನಿಸಿದ್ದು, ಜಿಲ್ಲಾಧಿಕಾರಿಗಳು ನನ್ನ ಮೇಲ್ಮನವಿಯನ್ನು ವಜಾಗೊಳಿಸಿರುತ್ತಾರೆ ಎಂದರೆ ಸರಿ.

**ಮುಂದುವರೆದ ಪಾಟೀ ಸವಾಲನ್ನು ಕೋರಿಕೆಯ ಮೇರೆಗೆ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ

ಸಹಿಃ
ಹಿರಿಯ ಸಿವಿಲ್ ನ್ಯಾಯಾಧೀಶರು
ವಿರಾಜಪೇಟೆ.

(ಸಾಕ್ಷಿದಾರರ ಸಹಿ)